## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಡಾ: ಸತೀಶ್‌ಕುಮಾರ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಶಿಡ್ಲಘಟ್ಟ ಮತ್ತು ಡಾ: ಕೆ.ವಿ. ರೆಡ್ಡಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾ.ಪಂ., ಚಿಂತಾಮಣಿ ಇವರುಗಳ ವಿರುದ್ಧ ಜಂಟಿ ಇಲಾಖಾ ವಿಚಾರಣೆ ಜರುಗಿಸಲು ವಿಚಾರಣಾಧಿಕಾರಿ ಮತ್ತು ಮಂಡನಾಧಿಕಾರಿಯನ್ನು ನೇಮಕಾತಿ ಮಾಡುವ ಬಗ್ಗೆ.

ಓದಲಾಗಿದೆ: 1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ ರವರ ಪತ್ರ ಸಂಖ್ಯೆ:ಜಿಪಂಚಿ:ಆಡಳಿತ:ಸಿಆರ್:2011-12 ದಿನಾಂಕ:19-10-2011
2. ಸರ್ಕಾರದ ಕಾರಣ ಕೇಳುವ ನೋಟೀಸು ದಿ:20-01-2014.
3. ಡಾ: ಸತೀಶ್‌ಕುಮಾರ್ ಮತ್ತು ಡಾ: ಕೆ.ವಿ. ರೆಡ್ಡಪ್ಪ, ಇವರ ಲಿಖಿತ ಹೇಳಿಕೆ ದಿ:5-2-2014 ಮತ್ತು ದಿನಾಂಕ: 29-01-2014.

-----

ಪ್ರಸ್ತಾವನೆ:

ಚಿಕ್ಕಬಳ್ಳಾಪುರ ಜಿಲ್ಲೆಯ ಸಮಾಜ ಕಲ್ಯಾಣ ಮತ್ತು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಲ್ಲಿ 2008-09 ನೇ ಸಾಲಿನ ವಿವಿಧ ಲೆಕ್ಕ ಶೀರ್ಷಿಕೆಗಳಡಿ ನಿಗದಿತ ಅನುದಾನಕ್ಕಿಂತ ಹೆಚ್ಚುವರಿಯಾಗಿ ಡಿ. ಸಿ. ಬಿಲ್ಲುಗಳಿಗೆ ಕಾನೂನು ಬಾಹಿರವಾಗಿ ಮೇಲುರುಜು ಮಾಡಿ ಹಣ ಸೆಳೆಯಲು ತಾಲ್ಲೂಕು ಸಮಾಜ ಕಲ್ಯಾಣ ಅಧಿಕಾರಿಗಳಿಗೆ ಸಹಕರಿಸಿ ಆರ್ಥಿಕ ಸಂಹಿತೆಗಳನ್ನು ಉಲ್ಲಂಘಿಸಿ ಅಧಿಕಾರ ದುರುಪಯೋಗಪಡಿಸಿಕೊಂಡಿದ್ದಾರೆಂಬ ಆರೋಪದ ಮೇರೆಗೆ ಈ ಕೆಳಕಂಡ ಅಧಿಕಾರಿಗಳಾದ :-

1. ಶ್ರೀ ಕೆ. ವಿ. ರೆಡ್ಡಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕ ಪಂಚಾಯತ್, ಚಿಂತಾಮಣಿ
2. ಶ್ರೀ ಎನ್. ಎಸ್. ಸತೀಶಕುಮಾರ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕ ಪಂಚಾಯತ್, ಶಿಡ್ಲಘಟ್ಟ.

ಇವರುಗಳಿಗೆ ಕರ್ನಾಟಕ ನಾಗರೀಕ ಸೇವಾ (ವನಿಮೇ) 1957ರ ನಿಯಮ 11ರಡಿ ಶಿಸ್ತು ಕ್ರಮ ಜರುಗಿಸಲು ಮೇಲೆ ಕ್ರಮಸಂಖ್ಯೆ (2) ರಲ್ಲಿ ಓದಲಾದ ದಿನಾಂಕ: 20-01-2014ರ ಸರ್ಕಾರದ ನೋಟೀಸ್‌ನಲ್ಲಿ ಅನುಬಂಧ-1 ರಿಂದ 4ನ್ನು ಒಳಗೊಂಡ ದೋಷಾರೋಪಣಾ ಪಟ್ಟಿಯೊಂದಿಗೆ ಕಾರಣ ಕೇಳುವ ನೋಟೀಸ್‌ನ್ನು ಜಾರಿಮಾಡಲಾಗಿತ್ತು. ಸದರಿ ನೋಟೀಸಿಗೆ ಅಪಾದಿತ ಅಧಿಕಾರಿಗಳು ಮೇಲೆ ಓದಲಾದ ಕ್ರಮಸಂಖ್ಯೆ (3) ರಲ್ಲಿ ಲಿಖಿತ ಹೇಳಿಕೆಗಳನ್ನು ಸಲ್ಲಿಸಿ ಅವರ ವಿರುದ್ಧದ ಆರೋಪವನ್ನು ನಿರಾಕರಿಸಿ ಆರೋಪಗಳನ್ನು ಕೈಬಿಡಲು ಕೋರಿರುತ್ತಾರೆ. ಸದರಿ ಅಪಾದಿತ ಅಧಿಕಾರಿಗಳು ಸಲ್ಲಿಸಿರುವ ಲಿಖಿತ ಹೇಳಿಕೆಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿದ್ದು, ಅವರು ಸಲ್ಲಿಸಿರುವ ವಿವರಣೆಗಳು ಸಮರ್ಥನೀಯವಾಗಿರುವುದಿಲ್ಲವಾದ್ದರಿಂದ ಸದರಿ ಅಧಿಕಾರಿಗಳ ವಿರುದ್ಧದ ಆರೋಪಗಳ ಸತ್ಯಾಸತ್ಯತೆಯನ್ನು ತಿಳಿಯಲು ಜಂಟಿ ಇಲಾಖಾ ವಿಚಾರಣೆಯನ್ನು ನಡೆಸಲು ಸರ್ಕಾರವು ನಿರ್ಧರಿಸಿ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 161 ವಿಸೇಜಿ 2011 ಬೆಂಗಳೂರು, ದಿನಾಂಕ:21-02-2014.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಡಾ: ಸತೀಶ್‌ಕುಮಾರ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಶಿಡ್ಲಘಟ್ಟ ಮತ್ತು ಡಾ: ಕೆ.ವಿ. ರೆಡ್ಡಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾ.ಪಂ., ಚಿಂತಾಮಣಿ ಇವರುಗಳ ವಿರುದ್ಧ ಮಾಡಿರುವ ಆರೋಪಗಳ ಬಗ್ಗೆ ಇಲಾಖಾ ವಿಚಾರಣೆ ನಡೆಸಲು, ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 11ರ ಅನುಸಾರ ಇಲಾಖಾ

ವಿಚಾರಣಾ ನಡೆಸಲು ಸದರಿ ನಿಯಮಾವಳಿಗಳ ನಿಯಮ 13ರ ಅಡಿಯಲ್ಲಿ ಜಂಟಿ ಇಲಾಖಾ ವಿಚಾರಣೆಗೆ ಆದೇಶಿಸಿದೆ.

ಈ ಇಲಾಖಾ ವಿಚಾರಣೆ ನಡೆಸಲು ಶ್ರೀ ಎಸ್.ವೈ. ಕುಂಬಾರ, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು, ಇವರನ್ನು ವಿಚಾರಣಾಧಿಕಾರಿಯಾಗಿ ಮತ್ತು ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತಿ, ಚಿಕ್ಕಬಳ್ಳಾಪುರ ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿದೆ.

ವಿಚಾರಣಾಧಿಕಾರಿಯವರು ಈ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 11 ರಲ್ಲಿ ನಿಗದಿ ಪಡಿಸಿರುವ ಕಾರ್ಯವಿಧಾನದ ಪ್ರಕಾರ ವಿಚಾರಣೆ ಜರುಗಿಸಿ ವರದಿಯನ್ನು ಮೂರು ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ನಿಯಮಾನುಸಾರ ನಿಗದಿತ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಂಗಳೂರು ಗ್ರಾಮಾಂತರ ಇವರು ವಿಚಾರಣಾಧಿಕಾರಿಯವರಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಚಂದ್ರಶೇಖರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ/ ಬೆಂಗಳೂರು(ಗ್ರಾ)
3. ಶ್ರೀ ಎಸ್.ವೈ. ಕುಂಬಾರ, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು, (ವಿಚಾರಣಾಧಿಕಾರಿ), ಮನೆ ನಂ. 394, 18ನೇ ಮೇನ್, 6ನೇ ಬ್ಲಾಕ್, ಕೋರಮಂಗಲ, ಬೆಂಗಳೂರು-95 (ಮೊಬೈಲ್ ನಂ. 9900245450).
4. ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತಿ, ಚಿಕ್ಕಬಳ್ಳಾಪುರ (ಮಂಡನಾಧಿಕಾರಿ). (ದೂ.ಸಂ.08156-277012)
5. ಸಂಬಂಧಿಸಿದ ಅಧಿಕಾರಿಗಳಿಗೆ.( ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ ಇವರ ಮುಖಾಂತರ)

ಪ್ರತಿಯನ್ನು:

1. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಸರ್ಕಾರದ ಕಾರ್ಯದರ್ಶಿ (ಪಂ.ರಾಜ್) /ಅಪರ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.
2. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
3. ಮಾಹಿತಿ ಕೇಂದ್ರ / ಶಾಖಾ ರಕ್ಷಕ ಕಡತ / ಹೆಚ್ಚುವರಿ ಪ್ರತಿ.